***Form No.4.***

***Deposition Sheet( R.P.52)***

ಹಿರಿಯ ಸಿವಿಲ್ ನ್ಯಾಯಾಧೀಶರ ನ್ಯಾಯಾಲಯ ಮತ್ತು ಹೆಚ್ಚುವರಿ ಮುಖ್ಯ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ಕಾರ್ಕಳ.

**CC 208/2024**

**CW-2**

**PW-4**

| | | |
|---|---|---|
| ಸಾಕ್ಷಿಯ ಹೆಸರು | ಃ | ಶಬರೀಶ |
| ತಂದೆ ಹೆಸರು | ಃ | ಶೇಖರ ಶೆಟ್ಟಿ |
| ಪ್ರಾಯ | ಃ | 25 ವರ್ಷ |
| ಉದ್ಯೋಗ | ಃ | ಬೇಕರಿಯಲ್ಲಿ ಕೆಲಸ |
| ವಾಸ | ಃ | ಕುಂದಾಪುರ |

ದಿನಾಂಕ **: 26.09.2025** ರಂದು ಪಿಡಬ್ಲ್ಯೂ - 4 /ಸಿಡಬ್ಲ್ಯೂ - 2 ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಮಾಡಿಸಲಾಯಿತು.

ಮುಖ್ಯ ವಿಚಾರಣೆಃ ಶ್ರೀ ಹಿರಿಯ ಸ.ಸ.ಅ. ರವರಿಂದಃ

ನಾನು 2024 ರಲ್ಲಿ ದುರ್ಗಾ ಕ್ಷನ್ಷಕ್ಷನ್ ಕಂಪನಿಯಲ್ಲಿ ಕೆಲಸ ಮಾಡುತ್ತಿದ್ದೆ. ಮೃತ ಬಾಶಿಯವರ ಪರಿಚಯವಿರುವುದಿಲ್ಲ. ಅಪಘಾತ ಆಗಿರುವುದನ್ನು ನಾನು ನೋಡಿರುವುದಿಲ್ಲ. ಅಪಘಾತದ ಬಗ್ಗೆ ಪೋಲೀಸರ ಮುಂದೆ ಯಾವುದೇ ಹೇಳಿಕೆ ನೀಡಿರುವುದಿಲ್ಲ. ನಿಪಿ - 6 ರಲ್ಲಿ ನನ್ನ ಸಹಿ ಇದ್ದು, ಸದರಿ ಸಹಿಯನ್ನು ನಿಪಿ - 6(ಬಿ)

CC 208/2024
CW2
PW4

ಎಂದು ಗುರುತಿಸಲಾಯಿತು. ಸದರಿ ಸಹಿಯನ್ನು ಅಪಘಾತದ ಮರುದಿನ ಸ್ಥಳಕ್ಕೆ ಕರೆಸಿ ನನ್ನ ಸಹಿ ಪಡೆದಿರುತ್ತಾರೆ. ಅಪಘಾತವು ಯಾವ ದಿನಾಂಕದಂದು ಆಗಿದೆ ಎಂದು ನನಗೆ ತಿಳಿದಿಲ್ಲ. ಪೋಲೀಸರು ನನ್ನ ಸಮಕ್ಷಮ ಯಾವುದೇ ಮಹಜರು ಮಾಡಿರುವುದಿಲ್ಲ. ಯಾವುದೇ ವಾಹನವನ್ನು ಬಿಡುಗಡೆ ಮಾಡಿರುವುದಿಲ್ಲ.

ಈ ಹಂತದಲ್ಲಿ ಸಾಕ್ಷಿದಾರರನ್ನು ಪ್ರತಿಕೂಲ ಸಾಕ್ಷಿಯಾಗಿ ಪರಿಗಣಿಸಬೇಕು ಎಂದು ಹಿರಿಯ.ಸ.ಸ.ಅ. ರವರು ಕೋರಿದ್ದು, ಪಾಟೀ ಸವಾಲಿಗೆ ಅನುಮತಿ ನೀಡಲಾಯಿತು.

<u>ಪಾಟೀ ಸವಾಲುಃ</u> ಹಿರಿಯ ಸ.ಸ.ಅ. ರವರಿಂದಃ

ದಿಃ 2024 ರಲ್ಲಿ ನಾನು ಕುಂದಾಪುರದ ದುರ್ಗಾ ಕಂಪನಿಯಲ್ಲಿ ಸೂಪರ್ ವೈಸರ್ ಆಗಿ ಕೆಲಸ ಮಾಡುತ್ತಿದ್ದೆ. ಆ ಸಮಯದಲ್ಲಿ ಪಡುಕುಡೂರು ಮುಖ್ಯ ರಸ್ತೆಯಿಂದ ಕೊಡಮಣಿತ್ತಾಯ ದೈವಸ್ಥಾನದ ರಸ್ತೆಯಲ್ಲಿ ನಿರ್ಮಾಣ ಕೆಲಸ ಮಾಡುವ ಸಮಯದಲ್ಲಿ ಅಪಘಾತವಾಗಿರುತ್ತದೆ. ದಿಃ 14.02.2024 ರಂದು ಸಂಜೆ 4.15 ರ ಸಮಯದಲ್ಲಿ 1 ನೇ ಆರೋಪಿಯು ಸಿಮೆಂಟ್ ಕಾಂಕ್ರೀಟ್ ಮಿಕ್ಷರ್ ವಾಹನವನ್ನು ನಿರ್ಲಕ್ಷ್ಯತನದಿಂದ ಚಲಾಯಿಸಿ, ಆಸಮಯದಲ್ಲಿ ಇನ್ನೊಬ್ಬ ಸೂಪರ್ ವೈಸರ್ ಆದ ಬಾಶಿಯವರಿಗೆ ಡಿಕ್ಕಿ ಪಡಿಸಿದ್ದಾರೆ ಎಂದರೆ ಸರಿಯಲ್ಲ.

ಅವರಿಗೆ ತೀವ್ರ ಸ್ವರೂಪದ ಗಾಯಗಳಾಗಿದ್ದರಿಂದ ನಾನು ಮತ್ತು ಚಾಸಾ 1 ರವರು ಸೇರಿ ಅಂಬ್ಯುಲೆನ್ಸ್ ನಲ್ಲಿ ಬಾಶಿಯವರನ್ನು ಹೆಬ್ರಿಯ ಸರಕಾರಿ ಆಸ್ಪತ್ರೆಗೆ ಕರೆದುಕೊಂಡು ಹೋಗಿರುತ್ತೇವೆ ಎಂದರೆ ಸರಿಯಲ್ಲ. ಸದರಿ ಆಸ್ಪತ್ರೆಯಲ್ಲಿ ಬಾಶಿಯವರು ಮೃತರಾಗಿರುತ್ತಾರೆ ಎಂದರೆ ನನಗೆ ಗೊತ್ತಿಲ್ಲ. 1 ನೇ ಆರೋಪಿಯ ನಿರ್ಲಕ್ಷ್ಯತನದಿಂದ ವಾಹನವನ್ನು ಚಲಾಯಿಸಿದ ಕಾರಣದಿಂದ ಅಪಘಾತವಾಗಿದೆ ಎಂದು ನಾನು ದಿಃ 15.02.2024 ರಂದು ಪೋಲೀಸರ ಮುಂದೆ ಈಗ ನನಗೆ ಓದಿ ಹೇಳಿದಂತೆ ಹೇಳಿಕೆ ನೀಡಿದ್ದೇನೆ ಎಂದರೆ ಸರಿಯಲ್ಲ. ನನ್ನ ಹೇಳಿಕೆಯನ್ನು ನಿಪಿ - 10 ಎಂದು ಗುರುತಿಸಲಾಯಿತು.

ದಿಃ 12.04.2024 ರಂದು ಪೋಲೀಸರು ನನ್ನನ್ನು ಮತ್ತು ಚಾಸಾ 1 ರವರನ್ನು ಠಾಣೆಗೆ ಕರೆಸಿ, 2 ನೇ ಆರೋಪಿಗೆ ನ್ಯಾಯಾಲಯದ ಆದೇಶದ ಪ್ರಕಾರವಾಗಿ ವಾಹನವನ್ನು ಬಿಡುಗಡೆ ಮಾಡಿರುತ್ತಾರೆ ಎಂದರೆ ಸರಿಯಲ್ಲ. 1 ಮತ್ತು 2 ನೇ ಆರೋಪಿಯ ಪರಿಚಯ ಇರುವುದಿಲ್ಲ. ನಾವುಗಳೆಲ್ಲ ಒಟ್ಟಿಗೆ ಕೆಲತಸ ಮಾಡುತ್ತಿದ್ದರೂ, ಅವರ ಪರಿಚಯವಿದ್ದರೂ ನಾನು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಅಪಘಾತವನ್ನು ಪ್ರತ್ಯಕ್ಷವಾಗಿ ನೋಡಿದ್ದರೂ ಸಹಾ ಆರೋಪಿತರಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಪೋಲೀಸರು ನಿಪಿ - 6 ರಂತೆ ನನ್ನ ಸಮಕ್ಷಮ

ಮಹಜರನ್ನು ಮಾಡಿ, ವಾಹನ ಬಿಡುಗಡೆ ಮಾಡಿದ್ದರೂ ಸಹಾ ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

ಪಾಟೀ ಸವಾಲುಃ ಆರೋಪಿ ಪರ ವಕೀಲರಿಂದ ಇರುವುದಿಲ್ಲ.

(ಸಾಕ್ಷಿಯ ಹೇಳಿಕೆಯಂತೆ ನಾನು ತೆರೆದ ನ್ಯಾಯಾಲಯದಲ್ಲಿ ಉಕ್ತಲೇಖನ ನೀಡಿದ್ದು, ಅದರಂತೆ ಬೆರಳಚ್ಚು ಮಾಡಲಾಯಿತು).

ಓ ಹೇ ಕೇ ಸರಿ ಇದೆ.

Sd/-

ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಎಸಿಜೆಎಂ.,

ಕಾರ್ಕಳ.